ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಗ್ರಾಮ ಲೆಕ್ಕಿಗರನ್ನು ಖಾಯಂ ಮಾಡುವ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

295 (421) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಂದಾಯ ಇಲಾಖೆಯಡಿಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಸಹಾಯಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನೌಕರರಿಗೆ ನೀಡುತ್ತಿರುವ ಮಾಸಿಕ ವೇತನ ಎಷ್ಟು ; ಸದರಿ ನೌಕರರು 38 ವರ್ಷಗಳಿಂದ ಕಡಿಮೆ ವೇತನಕ್ಕೆ ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇವರನ್ನು ಸರ್ಕಾರವು ಗ್ರೂಪ್ `ಡಿ' ದರ್ಜೆ ನೌಕರರೆಂದು ಪರಿಗಣಿಸಿ ಆದೇಶ ಹೊರಡಿಸುವುದು ಯಾವಾಗ;

(ಈ) ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಇತರೆ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ದಿನಗೂಲಿ ನೌಕರರನ್ನು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳನ್ನು ರೂಪಿಸಿ ವಿಲೀನಗೊಳಿಸಿದಂತೆ ಸದರಿ ಸಿಬ್ಬಂದಿಗಳನ್ನು ವಿಲೀನಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?